ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 525
ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ
ಉತ್ತರಿಸುವ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು
ಉತ್ತರಿಸುವ ದಿನಾಂಕ : 05-02-2021

<table>
<tr><th>ಕ್ರ.ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಈಗಾಗಲೇ ನಗರ ಮತ್ತು ಗ್ರಾಮಾಂತರ ಪ್ರದೇಶದಲ್ಲಿ ಶಾಲೆಗಳು ಪ್ರಾರಂಭವಾಗಿದ್ದು, ಅಲ್ಲಿನ ವಿದ್ಯಾರ್ಥಿಗಳಿಗೆ ಸಾರಿಗೆ ವ್ಯವಸ್ಥೆ ಕಲ್ಪಿಸಲು ಸರ್ಕಾರದಿಂದ ಯಾವ ಕ್ರಮ ಕೈಗೊಳ್ಳಲಾಗಿದೆ;</td><td>ನಗರ ಮತ್ತು ಗ್ರಾಮಾಂತರ ಪ್ರದೇಶಗಳಲ್ಲಿ ಶಾಲಾ-ಕಾಲೇಜು ಮಾರ್ಗಗಳಲ್ಲಿ ನಗರ, ಸಾಮಾನ್ಯ ಮತ್ತು ವೇಗದೂತ ಸಾರಿಗೆ ಸೇವೆಗಳನ್ನು ಪ್ರಾರಂಭಿಸಲಾಗಿದೆ. ನಾಲ್ಕೂ ಸಾರಿಗೆ ಸಂಸ್ಥೆಗಳಲ್ಲಿ ಕಾರ್ಯಾಚರಿಸುವ ಅನುಸೂಚಿಗಳ ವಿವರ ಈ ಕೆಳಕಂಡಂತಿದೆ:

<table><tr><th>ಸಂಸ್ಥೆಗಳು</th><th>ಅನುಸೂಚಿಗಳು</th></tr><tr><td>ಕ.ರಾ.ರ.ಸಾ.ನಿಗಮ</td><td>6964</td></tr><tr><td>ಬೆಂ.ಮ.ಸಾ.ಸಂಸ್ಥೆ</td><td>5272</td></tr><tr><td>ವಾ.ಕ.ರ.ಸಾ.ಸಂಸ್ಥೆ</td><td>4326</td></tr><tr><td>ಈ.ಕ.ರ.ಸಾ.ಸಂಸ್ಥೆ</td><td>3874</td></tr><tr><td>ಒಟ್ಟು</td><td>20436</td></tr></table>
ಸದರಿ ಸಾರಿಗೆಗಳು ಪ್ರಸ್ತುತ ಅವಶ್ಯಕತೆಗೆ ಅನುಗುಣವಾಗಿದ್ದು, ಪ್ರಯಾಣಿಕರ ಬೇಡಿಕೆ ಹಾಗೂ ಒತ್ತಡಕ್ಕನುಗುಣವಾಗಿ ಹೊಸ ಮಾರ್ಗಗಳನ್ನು ಪರಿಚಯಿಸಲು, ಹಾಲಿಯಿರುವ ಮಾರ್ಗಗಳಲ್ಲಿ ಸಾರಿಗೆಗಳನ್ನು ಹೆಚ್ಚಿಸಲು, ಪ್ರಯಾಣಿಕರ ಸಂಚಾರ ದಟ್ಟಣೆಗನುಗುಣವಾಗಿ ಸಾರಿಗೆಗಳನ್ನು ಪರಿಷ್ಕರಿಸಿ ಕಾರ್ಯಾಚರಣೆಗೊಳಿಸಲು ಯೋಜಿಸಲಾಗಿದೆ.

ವಿದ್ಯಾರ್ಥಿಗಳ ಹಿತದೃಷ್ಟಿಯಿಂದ 2019-20ನೇ ಸಾಲಿನ ವಿದ್ಯಾರ್ಥಿ ರಿಯಾಯಿತಿ ಬಸ್ ಪಾಸ್ ಹಾಗೂ ಹೊಸದಾಗಿ ಪ್ರವೇಶಾತಿ ಪಡೆದ ಶಾಲಾ-ಕಾಲೇಜು ಫಿ-ರಸೀತಿಯೊಂದಿಗೆ ದಿನಾಂಕ: 17-11-2020 ರಿಂದ 28-02-2021ರವರೆಗೆ ವಿದ್ಯಾರ್ಥಿ ತಮ್ಮ ವಾಸಸ್ಥಳದಿಂದ ಶಾಲಾ ಕಾಲೇಜುಗಳಿಗೆ ತೆರಳಲು ಉಚಿತ ಪ್ರಯಾಣಕ್ಕೆ ಅವಕಾಶ ಕಲ್ಪಿಸಲಾಗಿದೆ.

ಸಂಸ್ಥೆಗಳ ನಿಗದಿತ ನಿಲುಗಡೆಗಳಲ್ಲಿ ಬಸ್ ನಿಲುಗಡೆಗೊಳಿಸಿ ಎಲ್ಲ ವಿದ್ಯಾರ್ಥಿಗಳನ್ನು ಹತ್ತಿಸಿಕೊಂಡು ಹೋಗುವಂತೆ ಚಾಲನಾ ಸಿಬ್ಬಂದಿಗಳಿಗೆ ಸೂಕ್ತ ನಿರ್ದೇಶನವನ್ನು ನೀಡಲಾಗಿದೆ.</td></tr>
<tr><td>ಆ)</td><td>ವಿದ್ಯಾರ್ಥಿಗಳಿಗೆ ಬಸ್ ಪಾಸ್ ವ್ಯವಸ್ಥೆ ಕಲ್ಪಿಸುವಲ್ಲಿನ ಮಾನದಂಡಗಳೇನು;</td><td>ಸಾರಿಗೆ ಸಂಸ್ಥೆಗಳು ವಿದ್ಯಾರ್ಥಿಗಳ ಬಸ್ ಪಾಸ್ ವಿತರಣೆಯಲ್ಲಿ ಈ ಕೆಳಕಂಡ ಮಾನದಂಡಗಳನ್ನು ಅನುಸರಿಸುತ್ತಿವೆ:
1. ವಿದ್ಯಾರ್ಥಿಯು ಕರ್ನಾಟಕ ಸರ್ಕಾರ / ಭಾರತ ಸರ್ಕಾರದಿಂದ ಮಾನ್ಯತೆ ಪಡೆದ ಶಿಕ್ಷಣ ಸಂಸ್ಥೆಗಳು/ ವಿಶ್ವವಿದ್ಯಾನಿಲಯಗಳ ಪೂರ್ಣಾವಧಿ ಕೋರ್ಸುಗಳಲ್ಲಿ ಅಭ್ಯಸಿಸುತ್ತಿರಬೇಕು.
2. ವಿದ್ಯಾರ್ಥಿಗಳು ವಾಸಸ್ಥಳದಿಂದ ವಿದ್ಯಾಸಂಸ್ಥೆವರೆಗೆ ಪ್ರಯಾಣಿಸಲು, ಗರಿಷ್ಠ ಪ್ರಯಾಣ ಮಿತಿ 60 ಕಿ.ಮೀವರೆಗೆ ಬಸ್ ಪಾಸ್ ವಿತರಿಸಲಾಗುತ್ತಿದೆ.
3. ಪ್ರಸಕ್ತ ಸಾಲಿನಲ್ಲಿ ವಿದ್ಯಾಸಂಸ್ಥೆಗೆ ಶುಲ್ಕ ಪಾವತಿಸಿರುವ ರಸೀದಿ ಹಾಗೂ ಶಾಲಾ / ಕಾಲೇಜಿನ ಗುರುತಿನ ಚೀಟಿಯನ್ನು ಪಾಸು ಪಡೆಯುವ ವೇಳೆ ಹಾಜರುಪಡಿಸಬೇಕಿರುತ್ತದೆ.</td></tr>
</table>

		4. 7ನೇ ತರಗತಿ ವರೆಗೆ ವ್ಯಾಸಂಗ ಮಾಡುತ್ತಿರುವ ಎಲ್ಲಾ ವರ್ಗದ ವಿದ್ಯಾರ್ಥಿಗಳಿಗೆ ಉಚಿತ ಪಾಸು ವಿತರಿಸಲಾಗುತ್ತಿದೆ. 5. ಉಚಿತ ವಿದ್ಯಾರ್ಥಿ ಬಸ್ ಪಾಸ್‌ದಾರರು ನಿಗದಿತ ಸಂಸ್ಕರಣಾ ಶುಲ್ಕ ಮತ್ತು ಅಪಘಾತ ಪರಿಹಾರ ನಿಧಿ ಶುಲ್ಕವನ್ನು ಮಾತ್ರ (ಪ್ರಸ್ತುತ ರೂ.150/-) ಪಾವತಿಸಬೇಕಿರುತ್ತದೆ. 6. ರಿಯಾಯಿತಿ ಬಸ್ ಪಾಸ್‌ದಾರರು ನಿಗದಿತ ಪಾಸಿನ ಶುಲ್ಕ, ಸಂಸ್ಕರಣಾ ಶುಲ್ಕ ಹಾಗೂ ಅಪಘಾತ ಪರಿಹಾರ ನಿಧಿ ಶುಲ್ಕವನ್ನು ಪಾವತಿಸಬೇಕಿರುತ್ತದೆ. 7. 2017–18ನೇ ಸಾಲಿನಿಂದ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್ ವಿತರಣೆ ಮಾಡುತ್ತಿರುವುದರಿಂದ, ಸದರಿ ವರ್ಗದ ವಿದ್ಯಾರ್ಥಿಗಳು ಕಡ್ಡಾಯವಾಗಿ ಜಾತಿ ಪ್ರಮಾಣ ಪತ್ರದ ಪ್ರತಿಯನ್ನು ನೀಡಬೇಕಿರುತ್ತದೆ. 8. ಸಾರಿಗೆ ಸಂಸ್ಥೆಗಳು ಬಸ್‌ಗಳನ್ನು ಆಚರಣೆ ಮಾಡುವ ಮಾರ್ಗಗಳಿಗೆ ಮಾತ್ರ ಬಸ್ ಪಾಸ್‌ಗಳನ್ನು ವಿತರಿಸಲಾಗುತ್ತಿದೆ. 9. ಪ್ರಸ್ತುತ ಬಸ್ ಪಾಸುಗಳನ್ನು ಪಡೆಯಲು 'ಸೇವಾಸಿಂಧು' ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ, ಪಾಸುಗಳನ್ನು ಪಡೆಯಬೇಕಿರುತ್ತದೆ. ಮೇಲಿನ ಮಾನದಂಡಗಳಲ್ಲದೇ, ಬೆಂ.ಮ.ಸಾ.ಸಂಸ್ಥೆಗೆ ಸಂಬಂಧಿಸಿದಂತೆ ಕೆಳಕಂಡ ಮಾನದಂಡಗಳಿರುತ್ತವೆ: 1. ವಿದ್ಯಾರ್ಥಿಗಳು ಸಲ್ಲಿಸಿದ ಅರ್ಜಿಗಳನ್ನು (ರಾಜ್ಯ ಪಠ್ಯಕ್ರಮ ಅಭ್ಯಸಿಸುವ ವಿದ್ಯಾರ್ಥಿಗಳನ್ನು ಹೊರತುಪಡಿಸಿ) ಶಾಲಾ/ಕಾಲೇಜು ನೋಡಲ್ ಅಧಿಕಾರಿಗಳು ಪರಿಶೀಲಿಸಿ ಆನ್‌ಲೈನ್ ಮೂಲಕವೇ ಅನುಮೋದನೆಯನ್ನು ನೀಡುವುದು. 2. ರಾಜ್ಯ ಪಠ್ಯಕ್ರಮ ಅಭ್ಯಸಿಸುವ ವಿದ್ಯಾರ್ಥಿಗಳಿಗಾಗಿ ನಿಗಧಿತ ಅರ್ಜಿಯನ್ನು ನೀಡಿದ್ದು, ಸದರಿ ಅರ್ಜಿಗಳನ್ನು ವಿದ್ಯಾರ್ಥಿಗಳು ಭರ್ತಿ ಮಾಡಿ, ಶಾಲೆಯ ಮುಖ್ಯಸ್ಥರಿಂದ ದೃಢೀಕರಿಸಿ, ನಂತರ ಸ್ಕ್ಯಾನ್ ಮಾಡಿ ಆನ್‌ಲೈನ್ ಅರ್ಜಿಯಲ್ಲಿ ಅಪ್‌ಲೋಡ್ ಮಾಡುವುದು. ಸದರಿ ವಿದ್ಯಾರ್ಥಿಗಳ ಅರ್ಜಿಯನ್ನು ಬೆಂ.ಮ.ಸಾ.ಸಂಸ್ಥೆಯಿಂದ ಪರಿಶೀಲಿಸಿ ಅನುಮೋದಿಸಲಾಗುತ್ತಿದೆ. 3. ಈ ರೀತಿ ಅನುಮೋದನೆ ದೊರೆತ ನಂತರ ವಿದ್ಯಾರ್ಥಿಗಳು ಪಾಸ್ ಪಡೆಯುವ ಸ್ಥಳ, ದಿನಾಂಕ & ಸಮಯವನ್ನು ನಿಗಧಿಪಡಿಸಿಕೊಂಡು, ಅದರಂತೆ ಬೆಂಗಳೂರು ಒನ್ ಕೇಂದ್ರಗಳಲ್ಲಿ ಪಾಸಿನ ಮೊತ್ತ ಮತ್ತು ಸೇವಾ ಶುಲ್ಕವನ್ನು ಪಾವತಿಸಿ ವಿದ್ಯಾರ್ಥಿ ಪಾಸನ್ನು ಪಡೆಯಲು ಅವಕಾಶ ಕಲ್ಪಿಸಲಾಗಿದೆ.
ಇ)	ಕೋವಿಡ್-19 ಸಂದಿಗ್ಧ ಪರಿಸ್ಥಿತಿಯಲ್ಲಿ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್ ಸೌಲಭ್ಯ ಕಲ್ಪಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?	ಪ್ರಸ್ತುತ 1 ರಿಂದ 7ನೇ ತರಗತಿಯವರೆಗೆ ಅಭ್ಯಾಸ ಮಾಡುತ್ತಿರುವ ಶಾಲಾ ವಿದ್ಯಾರ್ಥಿಗಳಿಗೆ ಹಾಗೂ ಎಲ್ಲಾ ತರಗತಿಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸುಗಳನ್ನು ವಿತರಿಸಲಾಗುತ್ತಿದೆ.

ಸಂಖ್ಯೆ: ಟಿಡಿ 48 ಟಿಸಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು